**ಕರ್ನಾಟಕ ಸರ್ಕಾರ**

ವಿಷಯ: ನೇಕಾರರ ವಿಶೇಷ ಪ್ಯಾಕೇಜ್ ಯೋಜನೆಯಡಿ-02 ವಿದ್ಯುತ್ ಮಗ್ಗ ಖರೀದಿ ಮತ್ತು ಎಲೆಕ್ಟ್ರಾನಿಕ್ ಜಕಾರ್ಡ್ ಯೋಜನೆಯಡಿ ಸಹಾಯಧನ ನೀಡುವ ಬಗ್ಗೆ ಪರಿಷ್ಕೃತ ಮಾರ್ಗಸೂಚಿ ಹೊರಡಿಸುವ ಕುರಿತು.

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ: ವಾಕೈ 58 ಜಕೈಯೋ 2014. ದಿನಾಂಕ: 22.11.2014 (02 ವಿದ್ಯುತ್ ಮಗ್ಗ)
2. ಸರ್ಕಾರದ ಆದೇಶ ಸಂಖ್ಯೆ: ವಾಕೈ 84 ಜಕೈಯೋ 2016. ದಿನಾಂಕ: 19.05.2016 (02 ವಿದ್ಯುತ್ ಮಗ್ಗ)
3. ಸರ್ಕಾರದ ಆದೇಶ ಸಂಖ್ಯೆ: ವಾಕೈ 126 ಜಕೈಯೋ 2014. ದಿನಾಂಕ: 02.03.2015 (ವಿ.ಫ.ಯೋ-ಗಿ.ಉ.ಯೋ)
4. ಸರ್ಕಾರದ ಆದೇಶ ಸಂಖ್ಯೆ: ವಾಕೈ 56 ಜಕೈಯೋ 2014. ದಿನಾಂಕ: 26.07.2014 (ಎಲೆಕ್ಟ್ರಾನಿಕ್ ಜಕಾರ್ಡ್ )
5. ಜವಳಿ ಅಭಿವೃದ್ಧಿ ಆಯುಕ್ತರ ಪತ್ರ ಸಂಖ್ಯೆ: ಕೈಜಇ/ ಜವಳಿ/ ಜಪ್ರಅ/ ಮಾರ್ಗಸೂಚಿ/ ಸುತ್ತೋಲೆ/ 2018-19/1134. ದಿನಾಂಕ: 21.06.2018.

Office of the Commissioner for Textiles, Bangalore
No. 579
Date 14/09/18

\- - -

**ಪ್ರಸ್ತಾವನೆ:-**

ಉಲ್ಲೇಖಿತ ಸರ್ಕಾರದ ಆದೇಶಗಳಲ್ಲಿ ನೇಕಾರರ ವಿಶೇಷ ಪ್ಯಾಕೇಜ್ ಯೋಜನೆಯಡಿ-02 ವಿದ್ಯುತ್ ಮಗ್ಗ ಖರೀದಿ ಮತ್ತು ಎಲೆಕ್ಟ್ರಾನಿಕ್ ಜಕಾರ್ಡ್ ಯೋಜನೆಯಡಿ ಸಹಾಯಧನ ನೀಡುವ ಬಗ್ಗೆ ಮಾರ್ಗಸೂಚಿಯನ್ನು ಹೊರಡಿಸಲಾಗಿರುತ್ತದೆ.

ಪ್ರಸ್ತುತ ಈ ಯೋಜನೆಗಳ ಅಡಿ ಆಯ್ಕೆಯಾದ ಸಾಮಾನ್ಯ ವರ್ಗದ ಫಲಾನುಭವಿಗಳಿಗೆ ಯೋಜನಾ ಘಟಕದ ಶೇ.50 ರಷ್ಟು ಹಾಗೂ SCP/TSP ಯೋಜನೆ ಅಡಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಯೋಜನ ಘಟಕದ ಶೇ.90 ರಷ್ಟು ಸಹಾಯಧನವನ್ನು ಅರ್ಜಿಯೊಂದಿಗೆ ಸಲ್ಲಿಸುವ ಬ್ಯಾಂಕು/ ಹಣಕಾಸು ಸಂಸ್ಥೆಯ ತಾತ್ವಿಕ ಸಾಲ ಮಂಜೂರಾತಿ ಪತ್ರದನ್ವಯ ಇದುವರೆಗೆ ಸರ್ಕಾರದ ಸಹಾಯಧನದ ಮೊತ್ತವನ್ನು ಯೋಜನೆ ಅನುಷ್ಠಾನಕ್ಕೆ ಮುಂಚಿತವಾಗಿ ಫಲಾನುಭವಿ ಖಾತೆಗೆ ಬಿಡುಗಡೆ ಮಾಡಲಾಗುತ್ತಿದೆ.

ಅನೇಕ ಬ್ಯಾಂಕು/ ಹಣಕಾಸು ಸಂಸ್ಥೆಯವರು ಈ ಯೋಜನೆಗೆ ಅವಶ್ಯವಿರುವ ಸಾಲವನ್ನು ಫಲಾನುಭವಿಗಳಿಗೆ ಮಂಜೂರಾತಿ ಮಾಡಿದ್ದರೂ ಸಹ, ವಿವಿಧ ಕಾರಣಗಳಿಂದ ಸಾಲ ಬಿಡುಗಡೆ ಮಾಡುವಲ್ಲಿ ವಿಳಂಬವಾಗುತ್ತಿದ್ದು, ಸರ್ಕಾರದ ಸಹಾಯಧನವನ್ನು ಬ್ಯಾಂಕು/ ಹಣಕಾಸು ಸಂಸ್ಥೆಗಳಲ್ಲಿ ಅನಿರ್ದಿಷ್ಟ ಕಾಲ ಕಾಯ್ದಿರಿಸಿರುವುದು Parking of Fund ಆಗಿರುವುದು ಕಂಡು ಬಂದಿದೆ.

ತದನಂತರ ಯೋಜನೆಯನ್ನು ಅನುಷ್ಠಾನಗೊಳಸದೇ ಸರ್ಕಾರದಿಂದ ಬಿಡುಗಡೆ ಮಾಡಲಾದ ಸಹಾಯಧನವನ್ನು ಇಲಾಖೆಗೆ ಹಿಂದಿರುಗಿಸಿರುವ ಪ್ರಕರಣಗಳು ವರದಿಯಾಗುತ್ತಿವೆ.

ಈ ಮೇಲೆ ವಿವರಿಸಿದ ಹಿನ್ನೆಲೆಯಲ್ಲಿ, ಈ ಯೋಜನೆಗಳ ಅಡಿಯಲ್ಲಿ ಮಂಜೂರು ಮಾಡಲಾದ ಸಹಾಯಧನವನ್ನು ಅನಾವಶ್ಯಕವಾಗಿ ಬ್ಯಾಂಕ್/ ಹಣಕಾಸು ಸಂಸ್ಥೆಗಳಲ್ಲಿ ಇಡುವ ಬದಲು (Parking of Fund) ಹಾಗೂ ಯೋಜನೆಯನ್ನು ಅನುಷ್ಠಾನಗೊಳಿಸದೇ, ಸಹಾಯಧನವನ್ನು

ಹಿಂದಿರುಗಿಸುವಂತಹ ಪ್ರಕರಣಗಳನ್ನು ತಡೆಯುವುದು ಅವಶ್ಯವಾಗಿರುವುದರಿಂದ, ಸಹಾಯಧನ ಬಿಡುಗಡೆಯ ಬಗ್ಗೆ ಮಾರ್ಗಸೂಚಿಯನ್ನು ಭಾಗಶಃ ಪರಿಷ್ಕರಿಸಲು ಜವಳಿ ಅಭಿವೃದ್ಧಿ ಆಯುಕ್ತರು ಕೋರಿರುತ್ತಾರೆ.

ಜವಳಿ ಅಭಿವೃದ್ಧಿ ಆಯುಕ್ತರ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಪರಿಷ್ಕೃತ ಮಾರ್ಗಸೂಚಿಯನ್ನು ಹೊರಡಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ: ವಾಕೈ 36 ಜಕೈಯೋ 2017, ಬೆಂಗಳೂರು ದಿನಾಂಕ: 06.09.2018**

ಮೇಲೆ ಓದಲಾದ (1) ರಿಂದ (4)ರ ಆದೇಶದಲ್ಲಿ ಹೊರಡಿಸಲಾದ ಮಾರ್ಗಸೂಚಿಯನ್ನು ಭಾಗಶಃ ಪರಿಷ್ಕರಿಸಿ, ನೇಕಾರರ ವಿಶೇಷ ಪ್ಯಾಕೇಜ್ ಯೋಜನೆಯ ಸಾಮಾನ್ಯ, ವಿಶೇಷ ಘಟಕ ಮತ್ತು ಗಿರಿಜನ ಉಪಯೋಜನೆಗಳಡಿ ಫಲಾನುಭವಿಗಳು 02 ವಿದ್ಯುತ್ ಮಗ್ಗ ಹಾಗೂ ಎಲೆಕ್ಟ್ರಾನಿಕ್ ಜಕಾರ್ಡ್ ಖರೀದಿಗಾಗಿ ಬ್ಯಾಂಕಿನಿಂದ ಸಾಲ ಪಡೆದು ಯಂತ್ರೋಪಕರಣಗಳನ್ನು ಖರೀದಿ ಮಾಡಿ ಅಳವಡಿಸಿದ ನಂತರ ಅವಶ್ಯ ದಾಖಲಾತಿಗಳೊಂದಿಗೆ ಸಹಾಯಧನ ಬಿಡುಗಡೆಗಾಗಿ ಇಲಾಖೆಗೆ ಪ್ರಸ್ತಾವನೆಗಳನ್ನು ಸಲ್ಲಿಸತಕ್ಕದ್ದು. ಯೋಜನೆಯ ಅನುಷ್ಠಾನದ ಕುರಿತು ಇಲಾಖೆಯ ಅಧಿಕಾರಿಗಳು ಪರಿಶೀಲನೆ ನಡೆಸಿ, ಯಂತ್ರೋಪಕರಣಗಳು ಸ್ಥಾಪಿಸಲಾಗಿರುವುದನ್ನು ದೃಢೀಕರಿಸಿದ ನಂತರ ಸರ್ಕಾರದ ಸಹಾಯಧನವನ್ನು ಮರುಪಾವತಿ (Backend Subsidy) ಆಧಾರದ ಮೇಲೆ ಬಿಡುಗಡೆ ಮಾಡತಕ್ಕದ್ದು. ಉಳಿದಂತೆ ಸದರಿ ಯೋಜನೆಗಳ ಮಾರ್ಗಸೂಚಿಯ ಅಂಶಗಳನ್ನು ಮುಂದುವರೆಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

6/9/18
(ಬಿ. ವೆಂಕಟೇಶಮೂರ್ತಿ)
ಸರ್ಕಾರದ ಉಪಕಾರ್ಯದರ್ಶಿ(ಜವಳಿ)(ಪ್ರ)
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ

**ಇವರಿಗೆ,**

1. ಮಹಾಲೇಖಪಾಲರು, (ಎ ಮತ್ತು ಇ) ಜಿ.ಅಂಡ್ ಎಸ್.ಎ., ಕರ್ನಾಟಕ, ಆಡಿಟ್ ಭವನ, ಬೆಂಗಳೂರು.
2. ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ನಂ.86 ಶುಭೋದಯ ಕಾಂಪ್ಲೆಕ್ಸ್, ರೈಲ್ವೆ ಸಮನಾಂತರ ರಸ್ತೆ, ಕುಮಾರ ಪಾರ್ಕ್ ಪಶ್ಚಿಮ, ಬೆಂಗಳೂರು- 560 020.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
4. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-1).
5. ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
6. ಶಾಖಾ ರಕ್ಷಾ ಕಡತ : ಹೆಚ್ಚುವರಿ ಪ್ರತಿಗಳು.

**ಪ್ರತಿ ಮಾಹಿತಿಗಾಗಿ:**

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.